ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಹಾಸನ ನಗರದ ಎಸ್.ಎಂ.ಕೆ. ಬಡಾವಣೆ ಅಭಿವೃದ್ಧಿ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

168 (284) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ನಗರದ ಎಸ್.ಎಂ.ಕೆ. ಬಡಾವಣೆಯಲ್ಲಿ ಎಷ್ಟು ನಿವೇಶನಗಳನ್ನು ನಿರ್ಮಾಣ ಮಾಡಲಾಗಿದೆ; ಹಾಗೂ ಹಂಚಿಕೆ ಮಾಡಿರುವ ನಿವೇಶನಗಳೆಷ್ಟು; ಹಂಚಿಕೆಯಾಗದೇ ಉಳಿದಿರುವ ನಿವೇಶನಗಳೆಷ್ಟು; ಇಲ್ಲಿ ವಸತಿ ನಿರ್ಮಾಣ ಮಾಡಲು ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ; ಈ ಬಡಾವಣೆಯಲ್ಲಿ ನಿವೇಶನದಾರರಿಗೆ ಮನೆ ಕಟ್ಟಿಕೊಳ್ಳಲು ಪರವಾನಗಿ ನೀಡಲಾಗುತ್ತಿದೆಯೇ; (ವಿವರ ನೀಡುವುದು)

(ಆ) ಸದರಿ ಬಡಾವಣೆಯ ಅಭಿವೃದ್ಧಿಗಾಗಿ ಇಲ್ಲಿಯವರೆಗೆ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗಿದೆ; ಈ ಕಾಮಗಾರಿಗಳ ವೆಚ್ಚವೆಷ್ಟು; ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಈ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರ ವಿವರಗಳೇನು; (ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಹಾಸನ ನಗರದ ಎಸ್.ಎಂ.ಕೆ. ಬಡಾವಣೆಯ ಅಭಿವೃದ್ಧಿಗಾಗಿ ಕೈಗೊಂಡಿರುವ ಕಾಮಗಾರಿಗಳಲ್ಲಿ ಹಣ ದುರ್ಬಳಕೆಯಾಗಿರುವ ಬಗ್ಗೆ ದೂರುಗಳು ಬಂದಿವೆಯೇ; ಬಂದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ದೂರುಗಳ ವಿವರದೊಂದಿಗೆ ಮಾಹಿತಿ ನೀಡುವುದು)